# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ವಿರಾಜಪೇಟೆ

## ಸಿ.ಸಿ. ಸಂಖ್ಯೆ 77/2024

**ಚಾಸಾ : 2**

**ಪ್ರಾಸಾ : 2**

| | | |
|---|---|---|
| **ಹೆಸರು** | : | ಅಬ್ದುಲ್ ರಹೀಂ |
| **ತಂದೆಯ ಹೆಸರು** | : | ಮೊಹಮದ್ ಕೆ |
| **ವಯಸ್ಸು** | : | 40 ವರ್ಷ |
| **ಉದ್ಯೋಗ** | : | ವ್ಯಾಪಾರ |
| **ವಾಸಸ್ಥಳ** | : | ಎಂ ಜಿ ರಸ್ತೆ, ಸಿದ್ದಾಪುರ |

**ದಿನಾಂಕ ಃ 11-11-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ ಮಾನ್ಯ ಸ. ಸ. ಅ. ರವರಿಂದ ಃ -**

1. ಚಾಸಾ-1 ರವರ ಪರಿಚಯವಿರುವುದಿಲ್ಲ. ಚಾಸಾ3 ರವರ ಪರಿಚಯವಿರುತ್ತದೆ. ಅವರು ನನ್ನ ಸ್ನೇಹಿತ. ಆರೋಪಿಯ ಪರಿಚಯವಿರುವುದಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಏನು ಗೊತ್ತಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ ಕ್ರಮ ಜರುಗಿಸಿ, ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ಈ ಬಗ್ಗೆ ನಾನು ಯಾವುದೇ ಹೇಳಿಕೆ ನೀಡಿರುವುದಿಲ್ಲ.

ಮುಖ್ಯ ವಿಚಾರಣೆ ಮುಕ್ತಾಯ.

**(ಈ ಹಂತದಲ್ಲಿ *ಸ. ಸ. ಅ.* ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಕೋರಿಕೊಂಡಿದ್ದು, ಕೋರಿಕೆಯನ್ನು ಮನ್ನಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು : ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ**

1. ದಿನಾಂಕ 18-11-2023 ರಂದು ಸಮಯ ಸಂಜೆ 5.30 ಗಂಟೆಗೆ ನಾನು ಹಾಗೂ ಚಾಸಾ3 ರವರು ಸಿದ್ದಾಪುರ ನಗರದ ಖಾಸಗಿ ಬಸ್ ನಿಲ್ದಾಣದ ಬಳಿ ಇರುವಾಗ ಸಿದ್ದಾಪುರ ಪೊಲೀಸ್ ಠಾಣೆಯ ಸಿಬ್ಬಂದಿಯಾದ ಚಾಸಾ1 ರವರು ವಾಹನ ಸಂಚಾರ ನಿಯಂತ್ರಣ ಕರ್ತವ್ಯ ನಿರ್ವಹಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ಸಿದ್ದಾಪುರ ನಗರದ ಖಾಸಗಿ ಬಸ್ ನಿಲ್ದಾಣದ ಬಳಿ ಆರೋಪಿಯು

ನೋಂದಣಿ ಸಂಖ್ಯೆ ಕೆಎ 12 2890 ರ ರಾಯಲ್ ಎನ್ ಫೀಲ್ಡ್ ಮೋಟಾರ್ ಸೈಕಲ್ ನ್ನು ಸಾರ್ವಜನಿಕರಿಗೆ ತೊಂದರೆಯಾಗುವಂತೆ ನಿಲ್ಲಿಸಿದ್ದನ್ನು ನೋಡಿ, ಚಾಸಾ1 ರವರು ಸದರಿ ಮೋಟಾರ್ ಸೈಕಲ್ ನ ಬಳಿ ಹೋಗಿ ಈ ಬೈಕ್ ಯಾರದ್ದು, ಸಾರ್ವಜನಿಕರಿಗೆ ತೊಂದರೆಯಾಗುತ್ತದೆ ತೆಗೆಯಿರಿ ಎಂದು ಕೇಳಿದಾಗ ಆರೋಪಿಯು ಸಮವಸ್ತ್ರದಲ್ಲಿದ್ದ ಚಾಸಾ1 ರವರನ್ನು ಕುರಿತು ಬೈಕ್ ತೆಗಿ ಎಂದು ಹೇಳಲು ನೀನು ಯಾವನೋ, ನಾನು ಬೈಕ್ ತೆಗೆಯುವುದಿಲ್ಲ, ಸೂಳೇ ಮಗನೆ ಎಂದು ಕೊಡವ ಭಾಷೆಯಲ್ಲಿ ಬೈದು, ಆತನ ಕೈಯಲ್ಲಿದ್ದ ಹೆಲ್ಮೆಟ್ ನಿಂದ ಚಾಸಾ1 ರವರ ತಲೆಯ ಭಾಗಕ್ಕೆ ಹಾಗೂ ಎಡಕೈ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. ಅಷ್ಟರಲ್ಲಿ ನಾನು ಹಾಗೂ ಚಾಸಾ3 ರವರು ಅಲ್ಲಿಗೆ ಹೋಗಿ ಆರೋಪಿಯನ್ನು ತಡೆದು, ಚಾಸಾ1 ರವರಿಗೆ ಹೊಡೆಯದಂತೆ ಸಮಾಧಾನಪಡಿಸಿರುತ್ತೇವೆ ಎಂದರೆ ಸರಿಯಲ್ಲ. ನಂತರ ಆರೋಪಿಯು ಹೆಲ್ಮೆಟ್ನೊಂದಿಗೆ ಸದರಿ ಬೈಕ್ ನ್ನು ಚಾಲನೆ ಮಾಡಿಕೊಂಡು ಅಲ್ಲಿಂದ ಹೊರಟು ಹೋಗಿರುತ್ತಾರೆ ಎಂದರೆ ಸರಿಯಲ್ಲ. ನಂತರ ಸದರಿ ಕೃತ್ಯ ಸ್ಥಳಕ್ಕೆ ಸಿದ್ದಾಪುರ ಪೊಲೀಸ್ ಠಾಣೆಯ ಸಿಬ್ಬಂದಿಯಾದ ಚಾಸಾ12 ರವರು ಬಂದು ಚಿಕಿತ್ಸೆಯ ಬಗ್ಗೆ ಸಿದ್ದಾಪುರ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದು, ಸದರಿ ಆಸ್ಪತ್ರೆಯಲ್ಲಿ ವೈದ್ಯರು ಇಲ್ಲದಿದ್ದರಿಂದ ಚಾಸಾ1 ರವರನ್ನು ವಿರಾಜಪೇಟೆ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಬಂದು ಚಿಕಿತ್ಸೆಯನ್ನು ಕೊಡಿಸಿರುತ್ತಾರೆ ಎಂದರೆ ಸರಿಯಲ್ಲ. ನಂತರ ಚಾಸಾ1 ರವರು ಆರೋಪಿಯ ವಿರುದ್ಧ ಈ ಬಗ್ಗೆ ದೂರು ನೀಡಿರುವ ವಿಚಾರ ನನಗೆ ತಿಳಿದಿರುತ್ತದೆ ಎಂದರೆ ಸರಿಯಲ್ಲ. ಈ ಕುರಿತು ನಾನು ಯಾವುದೇ ಹೇಳಿಕೆಯನ್ನು ಪೋಲಿಸರಿಗೆ ಹೇಳಿರುವುದಿಲ್ಲ.

2. ಸಾಕ್ಷಿಗೆ ಹೇಳಿಕೆಯ ಸಂಪೂರ್ಣ ಭಾಗವನ್ನು ಓದಿ ಹೇಳಲಾಗಿ, ಸಾಕ್ಷಿಯು ಹೇಳಿಕೆಯನ್ನು ನಿರಾಕರಿಸಿದ್ದರಿಂದ ಸದರಿ ಹೇಳಿಕೆಯನ್ನು ನಿಪಿ6 ಎಂದು ಗುರುತಿಸಲಾಯಿತು. ಸದರಿ ಮಹಜರಿನ ಸಂಗತಿಗಳು ಗೊತ್ತಿದ್ದರೂ ಸಹ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟಿ ಸವಾಲು ಮುಕ್ತಾಯ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ-**

ಪಾಟಿ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ. ಹೇ. ಕೇ. ಸ. ಇದೆ.

ಸಹಿ/-
(ಪ್ರದೀಪ ಪೋತದಾರ)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.
ವಿರಾಜಪೇಟೆ.

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ವಿರಾಜಪೇಟೆ**

## ಸಿ.ಸಿ. ಸಂಖ್ಯೆ 77/2024

ಚಾಸಾ : **3**

ಪ್ರಾಸಾ : **3**

| | | |
|---|---|---|
| **ಹೆಸರು** | : | ಅಸ್ಲಾಂ ಪಾಷ |
| **ತಂದೆಯ ಹೆಸರು** | : | ಅಮೀರ್ ಜಾನ್ |
| **ವಯಸ್ಸು** | : | 37 ವರ್ಷ |
| **ಉದ್ಯೋಗ** | : | ಚಾಲಕ |
| **ವಾಸಸ್ಥಳ** | : | ಎಂ ಜಿ ರಸ್ತೆ, ಸಿದ್ದಾಪುರ |

**ದಿನಾಂಕ ಃ 11-11-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ ಮಾನ್ಯ ಸ. ಸ. ಅ. ರವರಿಂದ ಃ -**

1. ಚಾಸಾ-1 ರವರ ಪರಿಚಯವಿರುವುದಿಲ್ಲ. ಚಾಸಾ2 ರವರ ಪರಿಚಯವಿರುತ್ತದೆ. ಅವರು ನನ್ನ ಸ್ನೇಹಿತ. ಆರೋಪಿಯ ಪರಿಚಯವಿರುವುದಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಏನು ಗೊತ್ತಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ ಕ್ರಮ ಜರುಗಿಸಿ, ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ಈ ಬಗ್ಗೆ ನಾನು ಯಾವುದೇ ಹೇಳಿಕೆ ನೀಡಿರುವುದಿಲ್ಲ.

ಮುಖ್ಯ ವಿಚಾರಣೆ ಮುಕ್ತಾಯ.

**(ಈ ಹಂತದಲ್ಲಿ *ಸ. ಸ. ಅ.* ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಕೋರಿಕೊಂಡಿದ್ದು, ಕೋರಿಕೆಯನ್ನು ಮನ್ನಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು : ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ**

1. ದಿನಾಂಕ 18-11-2023 ರಂದು ಸಮಯ ಸಂಜೆ 5.30 ಗಂಟೆಗೆ ನಾನು ಹಾಗೂ ಚಾಸಾ2 ರವರು ಸಿದ್ದಾಪುರ ನಗರದ ಖಾಸಗಿ ಬಸ್ ನಿಲ್ದಾಣದ ಬಳಿ ಇರುವಾಗ ಸಿದ್ದಾಪುರ ಪೊಲೀಸ್ ಠಾಣೆಯ ಸಿಬ್ಬಂದಿಯಾದ ಚಾಸಾ1 ರವರು ವಾಹನ ಸಂಚಾರ ನಿಯಂತ್ರಣ ಕರ್ತವ್ಯ ನಿರ್ವಹಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ಸಿದ್ದಾಪುರ ನಗರದ ಖಾಸಗಿ ಬಸ್ ನಿಲ್ದಾಣದ ಬಳಿ ಆರೋಪಿಯು

ನೋಂದಣಿ ಸಂಖ್ಯೆ ಕೆಎ 12 2890 ರ ರಾಯಲ್ ಎನ್ ಫೀಲ್ಡ್ ಮೋಟಾರ್ ಸೈಕಲ್ ನ್ನು ಸಾರ್ವಜನಿಕರಿಗೆ ತೊಂದರೆಯಾಗುವಂತೆ ನಿಲ್ಲಿಸಿದ್ದನ್ನು ನೋಡಿ, ಚಾಸಾ1 ರವರು ಸದರಿ ಮೋಟಾರ್ ಸೈಕಲ್ ನ ಬಳಿ ಹೋಗಿ ಈ ಬೈಕ್ ಯಾರದ್ದು, ಸಾರ್ವಜನಿಕರಿಗೆ ತೊಂದರೆಯಾಗುತ್ತದೆ ತೆಗೆಯಿರಿ ಎಂದು ಕೇಳಿದಾಗ ಆರೋಪಿಯು ಸಮವಸ್ತ್ರದಲ್ಲಿದ್ದ ಚಾಸಾ1 ರವರನ್ನು ಕುರಿತು ಬೈಕ್ ತೆಗಿ ಎಂದು ಹೇಳಲು ನೀನು ಯಾವನೋ, ನಾನು ಬೈಕ್ ತೆಗೆಯುವುದಿಲ್ಲ, ಸೂಳೇ ಮಗನೆ ಎಂದು ಕೊಡವ ಭಾಷೆಯಲ್ಲಿ ಬೈದು, ಆತನ ಕೈಯಲ್ಲಿದ್ದ ಹೆಲ್ಮೆಟ್ ನಿಂದ ಚಾಸಾ1 ರವರ ತಲೆಯ ಭಾಗಕ್ಕೆ ಹಾಗೂ ಎಡಕ್ಕೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. ಅಷ್ಟರಲ್ಲಿ ನಾನು ಹಾಗೂ ಚಾಸಾ2 ರವರು ಅಲ್ಲಿಗೆ ಹೋಗಿ ಆರೋಪಿಯನ್ನು ತಡೆದು, ಚಾಸಾ1 ರವರಿಗೆ ಹೊಡೆಯದಂತೆ ಸಮಾಧಾನಪಡಿಸಿರುತ್ತೇವೆ ಎಂದರೆ ಸರಿಯಲ್ಲ. ನಂತರ ಆರೋಪಿಯು ಹೆಲ್ಮೆಟ್ನೊಂದಿಗೆ ಸದರಿ ಬೈಕ್ ನ್ನು ಚಾಲನೆ ಮಾಡಿಕೊಂಡು ಅಲ್ಲಿಂದ ಹೊರಟು ಹೋಗಿರುತ್ತಾರೆ ಎಂದರೆ ಸರಿಯಲ್ಲ. ನಂತರ ಸದರಿ ಕೃತ್ಯ ಸ್ಥಳಕ್ಕೆ ಸಿದ್ದಾಪುರ ಪೊಲೀಸ್ ಠಾಣೆಯ ಸಿಬ್ಬಂದಿಯಾದ ಚಾಸಾ12 ರವರು ಬಂದು ಚಿಕಿತ್ಸೆಯ ಬಗ್ಗೆ ಸಿದ್ದಾಪುರ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದು, ಸದರಿ ಆಸ್ಪತ್ರೆಯಲ್ಲಿ ವೈದ್ಯರು ಇಲ್ಲದಿದ್ದರಿಂದ ಚಾಸಾ1 ರವರನ್ನು ವಿರಾಜಪೇಟೆ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಬಂದು ಚಿಕಿತ್ಸೆಯನ್ನು ಕೊಡಿಸಿರುತ್ತಾರೆ ಎಂದರೆ ಸರಿಯಲ್ಲ. ನಂತರ ಚಾಸಾ1 ರವರು ಆರೋಪಿಯ ವಿರುದ್ದ ಈ ಬಗ್ಗೆ ದೂರು ನೀಡಿರುವ ವಿಚಾರ ನನಗೆ ತಿಳಿದಿರುತ್ತದೆ ಎಂದರೆ ಸರಿಯಲ್ಲ. ಈ ಕುರಿತು ನಾನು ಯಾವುದೇ ಹೇಳಿಕೆಯನ್ನು ಪೋಲಿಸರಿಗೆ ಹೇಳಿರುವುದಿಲ್ಲ.

2. ಸಾಕ್ಷಿಗೆ ಹೇಳಿಕೆಯ ಸಂಪೂರ್ಣ ಭಾಗವನ್ನು ಓದಿ ಹೇಳಲಾಗಿ, ಸಾಕ್ಷಿಯು ಹೇಳಿಕೆಯನ್ನು ನಿರಾಕರಿಸಿದ್ದರಿಂದ ಸದರಿ ಹೇಳಿಕೆಯನ್ನು ನಿಪಿ7 ಎಂದು ಗುರುತಿಸಲಾಯಿತು. ಸದರಿ ಮಹಜರಿನ ಸಂಗತಿಗಳು ಗೊತ್ತಿದ್ದರೂ ಸಹ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟಿ ಸವಾಲು ಮುಕ್ತಾಯ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ-**

ಪಾಟಿ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ. ಹೇ. ಕೇ. ಸ. ಇದೆ.

ಸಹಿ/-
(ಪ್ರದೀಪ ಪೋತದಾರ)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.
ವಿರಾಜಪೇಟೆ.